# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಗುರುಮೂರ್ತಿ, ಬಿನ್ ಅಂಕೇಗೌಡ, ಕ್ಯಾತನಹಳ್ಳಿ, ಗ್ರಾಮ ಪಾಂಡವಪುರ ತಾಲ್ಲೂಕು, ಇವರಿಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲು ಸಾಧ್ಯವಾಗದೆ ಇರುವುದಕ್ಕೆ ಸ್ಪಷ್ಟ ಕಾರಣ ಮತ್ತು ಪರಿಹಾರವನ್ನು ಹುಡುಕುವ ಬಗ್ಗೆ ಹಿರಿಯ ಅಧಿಕಾರಿಯನ್ನು ನೇಮಿಸುವ ಕುರಿತು.

ಓದಲಾಗಿದೆ:- 1) ಕರ್ನಾಟಕ ಮಾನವ ಹಕ್ಕುಗಳ ಆಯೋಗ, ಬೆಂಗಳೂರು ಇವರ ಆದೇಶ ಸಂಖ್ಯೆ: ಹೆಚ್.ಆರ್.ಸಿ.ಆರ್-4/2015(ಎಸ್‌ಬಿ-3) ದಿನಾಂಕ:08.04:2015
2) ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ ಮಂಡ್ಯ, ಇವರ ಆದೇಶ ದಿನಾಂಕ: 20.08.2015

****

ಪ್ರಸ್ತಾವನೆ:

ಶ್ರೀ ಗುರುಮೂರ್ತಿ ಬಿನ್ ಶ್ರೀ ಅಂಕೇಗೌಡ, ಕ್ಯಾತನಹಳ್ಳಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ನೀರಿನ ಸಂಪರ್ಕ ಪಡೆಯುವ ಸಂಬಂಧ ಕ್ಯಾತನಹಳ್ಳಿ ಗ್ರಾ.ಪಂ.ನ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಇವರಿಗೆ ಕೋರಿಕೆ ಸಲ್ಲಿಸಿದ್ದು, ನಂತರ ಕುಡಿಯುವ ನೀರು ಸಂಪರ್ಕ ಕಲ್ಪಿಸದೆ ವಿಳಂಬಿಸಿದ ಕಾರಣ ಸದರಿ ಉದಾಸೀನತೆ ವಿರುದ್ಧ ಅವರು ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ., ಪಾಂಡವಪುರ ಮತ್ತು ಮು.ಕಾ.ನಿ.ಅ. ಜಿ.ಪಂ. ಮಂಡ್ಯ ಇವರುಗಳನ್ನು ಸಂಪರ್ಕಿಸಿರುತ್ತಾರೆ. ಈ ಪ್ರಯತ್ನಗಳಿಂದ ಅವರು ಯಶ ಕಾಣದ ಹಿನ್ನಲೆಯಲ್ಲಿ ಮಾನವ ಹಕ್ಕುಗಳ ಆಯೋಗ ಮತ್ತು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ, ಮಂಡ್ಯ ಇಲ್ಲಿಯೂ ಸಹ ಮನವಿಗಳನ್ನು ಸಲ್ಲಿಸಿರುವುದು ಕಂಡುಬರುತ್ತದೆ.

ಮಾನವ ಹಕ್ಕುಗಳ ಆಯೋಗವು ಶ್ರೀ ಗುರುಮೂರ್ತಿ ಇವರ ಅರ್ಜಿಗೆ ಸಂಬಂಧಿಸಿದಂತೆ ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ದಿನಾಂಕ: 08.04.2015ರಂದು ನೀಡಿರುವ ಆದೇಶದಲ್ಲಿ ಈ ಪ್ರಕರಣಕ್ಕೆ ಸಂಬಂಧಪಟ್ಟ ಎಲ್ಲಾ ದಾಖಲೆಗಳ ಪರಿಶೀಲನೆಯಿಂದ ಕ್ಯಾತನಹಳ್ಳಿ ಗ್ರಾ.ಪಂ.ನ ಪಂ.ಅ.ಅಧಿಕಾರಿ ರವರು ಶ್ರೀ ಗುರುಮೂರ್ತಿ ಇವರಿಗೆ ನಲ್ಲಿ ನೀರಿನ ಸಂಪರ್ಕ ಒದಗಿಸಲು ವಿಫಲರಾಗಿರುವುದು ಸ್ಪಷ್ಟವಾಗಿರುವುದರಿಂದ ಸದರಿಯವರು ಸರ್ಕಾರಿ ನೌಕರರಾಗಿ ತಮ್ಮ ಮೇಲಾಧಿಕಾರಿಗಳ ಆದೇಶವನ್ನು ಪಾಲಿಸದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದನ್ನು ತಿಳಿಸಿ ಮಾನವ ಹಕ್ಕುಗಳ ಉಲ್ಲಂಘನೆಯಾಗಿರುವುದರಿಂದ ಸದರಿಯವರ ವಿರುದ್ಧ ಕಠಿಣ (stern action) ಕ್ರಮ ಕೈಗೊಳ್ಳಲು ಶಿಫಾರಸ್ಸು ಮಾಡಿರುತ್ತದೆ. ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಆದೇಶದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆಯೂ ಸಹ ಕುಡಿಯುವ ನೀರಿನ ಸಂಪರ್ಕವನ್ನು ದಿನಾಂಕ: 20.08.2015ರಿಂದಲೇ ಒದಗಿಸಲು ತಪ್ಪಿದಲ್ಲಿ ಪ್ರತಿ ದಿನ ರೂ.100/-ಗಳಂತೆ ಪಿರ್ಯಾದುದಾರರಿಗೆ ಪಾವತಿಸಲು ಎದುರುದಾರರಾದ ಪಂ.ಅ.ಅಧಿಕಾರಿ ಮತ್ತು ಗ್ರಾ.ಪಂ. ಅಧ್ಯಕ್ಷರು ಜವಾಬ್ದಾರರಾಗಿರುತ್ತಾರೆಂದು ಹಾಗೂ ಈ ಸಂಬಂಧ ಅವರಿಗೆ ದಂಡದ ಮೊತ್ತವನ್ನು ಪಾವತಿಸಲು ಆದೇಶಿಸಿರುತ್ತದೆ.

ಮಾನವ ಹಕ್ಕುಗಳ ಆಯೋಗದ ಆದೇಶದ ನಂತರ ಮಂಡ್ಯ ಜಿ.ಪಂ. ಕಾರ್ಯಾಲಯವು ಶ್ರೀ ಗುರುಮೂರ್ತಿ ಇವರ ಮನೆಗೆ ನೀರಿನ ಸಂಪರ್ಕ ಕಲ್ಪಿಸುವ ಸಂಬಂಧ ಕ್ರಮ ಕೈಗೊಳ್ಳಲು ಮುಂದಾಗಿದ್ದು, ಶ್ರೀ ಗುರುಮೂರ್ತಿ ಇವರು ವಾಣಿಜ್ಯ ಉದ್ದೇಶಕ್ಕಾಗಿ ನೀರಿನ ಸಂಪರ್ಕವನ್ನು ಕೋರಿರುತ್ತಾರೆಂದು ಹಾಗಾಗಿ ಆಯೋಗದ ಆದೇಶದಂತೆ ನೀರಿನ ಸಂಪರ್ಕ ಕಲ್ಪಿಸಲು

ಸಾಧ್ಯವಿಲ್ಲವೆಂದು ಪಾಂಡವಪುರ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ರವರು ಈ ಸಂಬಂಧ ವರದಿ ಮಾಡಿದ್ದಾರೆಂದು ಶ್ರೀ ಗುರುಮೂರ್ತಿ ಇವರು ಕೇಳಿರುವ ಸ್ಥಳವು ಗ್ರಾಮದ ಮುಖ್ಯ ರಸ್ತೆಯಾಗಿದ್ದು, ಈ ಕಟ್ಟಡದ ಸುತ್ತಲೂ ಯಾವುದೇ ಚರಂಡಿ ವ್ಯವಸ್ಥೆ ಇಲ್ಲದಿರುವುದರಿಂದ ಸದರಿಯವರ ಕಟ್ಟಡದ 15 ಮೀಟರ್ ಅಂತರದಲ್ಲಿರುವ ಇರುವ ಸಾರ್ವಜನಿಕ ನಲ್ಲಿ ಸಂಪರ್ಕವನ್ನು ಬಳಸಿಕೊಳ್ಳಲು ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಎಂದು ಸದರಿಯವರಿಗೆ ನೀರಿನ ಸಂಪರ್ಕ ಕಲ್ಪಿಸಲು ಸಾರ್ವಜನಿಕರಿಂದ ಆಕ್ಷೇಪಣೆ ಇರುತ್ತದೆ ಎಂದು; ಆದಾಗ್ಯೂ, ಕಾರ್ಯನಿರ್ವಾಹಕ ಅಧಿಕಾರಿಯವರ ಸಮಕ್ಷಮದಲ್ಲಿ ದಿನಾಂಕ: 30.07.2015ರಂದು ನೀರಿನ ಸಂಪರ್ಕ ಕಲ್ಪಿಸಲು ಮುಂದುವರೆದಿದ್ದು, ಆ ಸಂದರ್ಭದಲ್ಲಿ ಸಾರ್ವಜನಿಕರು / ಗ್ರಾಮಸ್ಥರು ಆಕ್ಷೇಪಣೆ ವ್ಯಕ್ತಪಡಿಸಿ ಆ ರಸ್ತೆಯಲ್ಲಿ 40-50 ಅಂಗಡಿ ಮಳಿಗೆಗಳಿದ್ದು, ತಮಗೂ ಸಹ ನೀರಿನ ಪ್ರತ್ಯೇಕ ಪೈಪ್ ಲೈನ್ ವ್ಯವಸ್ಥೆ ಮಾಡುವಂತೆ ಹಾಗೂ ಕಲುಷಿತ ನೀರು ಸರಾಗವಾಗಿ ಹೋಗಲು ಚರಂಡಿ ವ್ಯವಸ್ಥೆ ಕಲ್ಪಿಸುವವರೆಗೆ ನೀರಿನ ಸಂಪರ್ಕ ಕಲ್ಪಿಸಬಾರದೆಂದು ಆಕ್ಷೇಪಣೆಯನ್ನು ವ್ಯಕ್ತಪಡಿಸಿ ಆ ಸಂದರ್ಭದಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ನಿಂದನೆ ಮಾಡಿ ಪೈಪ್ ಲೈನ್ ಅನ್ನು ಕಿತ್ತು ಎಸೆದಿರುತ್ತಾರೆಂದು ಪಂ.ಅ.ಅಧಿಕಾರಿಯವರು ಕರ್ನಾಟಕ ಮಾನವ ಹಕ್ಕುಗಳ ಆಯೋಗಕ್ಕೆ ದಿನಾಂಕ: 17.08.2015ರ ಪತ್ರದಲ್ಲಿ ವರದಿ ಮಾಡಿರುತ್ತಾರೆ.

ಈ ಎಲ್ಲಾ ವಸ್ತು ಸ್ಥಿತಿಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದಾಗ, ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲು ಗ್ರಾ.ಪಂ. ಅಧಿಕಾರಿಗಳು ಮತ್ತು ತಾ.ಪಂ. ಅಧಿಕಾರಿಗಳು ಮೇಲ್ನೋಟಕ್ಕೆ ವಿಫಲರಾಗಿರುವುದು ಕಂಡುಬರುತ್ತದೆ. ಕೇವಲ ಒಬ್ಬ ಅರ್ಜಿದಾರರಿಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲು ಹಳ್ಳಿಯ ಗ್ರಾಮಸ್ಥರು ಮತ್ತು ಸಾರ್ವಜನಿಕರು ಆಕ್ಷೇಪಣೆ ವ್ಯಕ್ತಪಡಿಸಿ ಅಳವಡಿಸಿದ್ದ ಪೈಪ್ ಲೈನ್ ಅನ್ನು ಕಿತ್ತು ಹಾಕಿರುತ್ತಾರೆಂಬ ಅಂಶವನ್ನು ಒಪ್ಪಲು ಸಾಧ್ಯವಿರುವುದಿಲ್ಲ. ಒಂದು ವೇಳೆ ಇಂತಹ ಸಂದರ್ಭ ಎದುರಾಗಿದ್ದಲ್ಲಿ ಅದನ್ನು ದುರುದ್ದೇಶಪೂರಿತ ಕ್ರಮವೆಂದು ಭಾವಿಸಬೇಕಾಗುತ್ತದೆ. ಕುಡಿಯುವ ನೀರಿನ ಸಂಪರ್ಕದಂತಹ ಮೂಲಭೂತ ಸೌಲಭ್ಯವನ್ನು ಕಲ್ಪಿಸುವುದು ಪ್ರತಿಯೊಂದು ಗ್ರಾಮ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ಆದ್ಯ ಕರ್ತವ್ಯವಾಗಿರುತ್ತದೆ.

ಮಾನವ ಹಕ್ಕುಗಳ ಆಯೋಗದ ನಿರ್ದೇಶನ, ಜಿಲ್ಲಾ ಗ್ರಾಹಕರ ಪರಿಹಾರ ವೇದಿಕೆ ಇವರುಗಳ ಎಲ್ಲಾ ನಿರ್ದೇಶನಗಳನ್ನು ಪಾಲಿಸದೆ ಕ್ಷುಲ್ಲಕ ಕಾರಣಗಳನ್ನು ಆಧರಿಸಿ ನೀರಿನ ಸಂಪರ್ಕ ಕಲ್ಪಿಸದೇ ಇರುವುದು ಕಂಡು ಬರುವುದಲ್ಲದೆ ಜಿಲ್ಲಾ ಪಂಚಾಯತಿ ಮಟ್ಟದ ಎಲ್ಲಾ ಹಂತದಲ್ಲಿಯೂ ಸಮಸ್ಯೆ ಬಗೆ ಹರಿಸಲು ವಿಫಲರಾಗಿರುವುದು ಕಂಡು ಬಂದಿರುವುದರಿಂದ, ಶ್ರೀ ಗುರುಮೂರ್ತಿ, ಇವರಿಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲು ಸಾಧ್ಯವಾಗದೆ ಇರುವುದಕ್ಕೆ ಸ್ಪಷ್ಟ ಕಾರಣವನ್ನು ಗುರುತಿಸುವ ಮತ್ತು ಇದಕ್ಕೆ ಪರಿಹಾರಗಳನ್ನು ಹುಡುಕಲು ಸರ್ಕಾರವು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 229 ವಿಸೇಚಿ 2015 ಬೆಂಗಳೂರು ದಿನಾಂಕ: 30.09.2015</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಗುರುಮೂರ್ತಿ ಬಿನ್ ಶ್ರೀ ಅಂಕೇಗೌಡ, ಕ್ಯಾತನಹಳ್ಳಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರಿಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲು ಸಾಧ್ಯವಾಗದೆ ಇರುವುದಕ್ಕೆ ಸ್ಪಷ್ಟ ಕಾರಣವನ್ನು ಗುರುತಿಸುವ ಮತ್ತು ಇದಕ್ಕೆ ಪರಿಹಾರಗಳನ್ನು ಕಂಡುಹಿಡಿಯುವ ಸಲುವಾಗಿ, ಶ್ರೀ ಮುನೀಶ್ ಮೌದ್ಗಿಲ್, ಆಯುಕ್ತರು. ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,

ಇವರನ್ನು ನಿಯೋಜಿಸಿ ಆದೇಶಿಸಿದೆ. ಇವರು ಈ ಆದೇಶದ ದಿನಾಂಕದಿಂದ 15 ದಿನಗಳೊಳಗಾಗಿ ಸ್ಥಳ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವಸ್ತುಸ್ಥಿತಿಯ ಬಗ್ಗೆ ವರದಿ ಸಲ್ಲಿಸಲು ಸೂಚಿಸಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರು ನಿಯೋಜಿತ ಅಧಿಕಾರಿಗೆ ಎಲ್ಲಾ ರೀತಿಯ ಸಹಕಾರವನ್ನು ನೀಡುವುದು.

ನಿಯೋಜಿತ ಅಧಿಕಾರಿಗಳು ನಿಯಮಾನುಸಾರ ಲಭ್ಯವಾಗುವ ಭತ್ಯೆಗಳನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬೆಂಗಳೂರು.
   (ಉಪನಿರ್ದೇಶಕರು, ಮತ್ತು ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ದಿನಾಂಕ: 29.08.2015 ರ ಅ.ಟಿ ಮತ್ತು ಸಂಬಂಧಿಸಿದ ದಾಖಲೆಗಳ ಪ್ರತಿಗಳೊಂದಿಗೆ)
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ
4) ಶ್ರೀ ಗುರುಮೂರ್ತಿ ಬಿನ್ ಶ್ರೀ ಅಂಕೇಗೌಡ, ಕ್ಯಾತನಹಳ್ಳಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ.

**ಪ್ರತಿ ಮಾಹಿತಿಗಾಗಿ:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
2) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

GO